ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 23–12–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | 1ನೇ ತಂಡದ ಅಬಕಾರಿ ರಕ್ಷಕರ ನಿರ್ಗಮನ ಪಥಸಂಚಲನ<br><br>ಗೌರವ ವಂದನೆ ಸ್ವೀಕಾರ:<br>ಶ್ರೀ ಸತೀಶ್ ಜಾರಿಕಿಹೊಳಿ<br>ಅಬಕಾರಿ ಸಚಿವರು | 24–12–2014<br>ಬೆಳಗ್ಗೆ<br>8.30 ಗಂಟೆಗೆ | ಸಶಸ್ತ್ರ ಪೊಲೀಸ್ ತರಬೇತಿ ಶಾಲೆ, ಯಲಹಂಕ, ಬೆಂಗಳೂರು |
| 2 | ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2014<br><br>ಉದ್ಘಾಟನೆ:<br>ಶ್ರೀ ದಿನೇಶ್ ಗುಂಡೂರಾವ್<br>ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರು<br><br>ಮುಖ್ಯ ಅತಿಥಿಗಳು:<br>ಶ್ರೀ ರಾಮಲಿಂಗಾರೆಡ್ಡಿ<br>ಸಾರಿಗೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು, ಬೆಂಗಳೂರು<br><br>ಅಧ್ಯಕ್ಷತೆ:<br>ಶ್ರೀ ಆರ್.ರೋಷನ್ ಬೇಗ್<br>ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರು. | 24–12–2014<br>ಬೆಳಗ್ಗೆ<br>10.30 ಗಂಟೆಗೆ | ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು |
| 3. | ಸಫಾಯಿ ಕರ್ಮಚಾರಿಗಳ ಕುಂದು ಕೊರತೆಗಳ ತಪಾಸಣೆ.<br><br>ಶ್ರೀ ನಾರಾಯಣ<br>ಅಧ್ಯಕ್ಷರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ. | 24–12–2014<br>ಬೆಳಗ್ಗೆ<br>10.30 ಗಂಟೆಗೆ | ವಿಕ್ಟೋರಿಯಾ ಆಸ್ಪತ್ರೆ ಬೆಂಗಳೂರು |
| 4 | ಪತ್ರಿಕಾ ಗೋಷ್ಠಿ:<br>22ನೇ ರಾಷ್ಟ್ರೀಯ ಮಟ್ಟದ ಮಕ್ಕಳ ವಿಜ್ಞಾನ ಸಮಾವೇಶ–2014 ಕುರಿತು. | 24–12–2014<br>ಬೆಳಗ್ಗೆ<br>11.30 ಗಂಟೆಗೆ | ಕೊಠಡಿ ಸಂಖ್ಯೆ: 419 ವಿಕಾಸಸೌಧ |

| | | | |
|---|---|---|---|
| | ಶ್ರೀ ಎಸ್.ಆರ್ ಪಾಟೀಲ<br>ಯೋಜನೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು. | | |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**ಬೆಂಗಳೂರು:ಡಿಸೆಂಬರ್:23:(ಕರ್ನಾಟಕ ವಾರ್ತೆ):–**

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯಾವಹಾರಗಳ ಇಲಾಖೆಯು ಡಿಸೆಂಬರ್ 24 ರಂದು ಬೆಳಿಗ್ಗೆ 10.30 ಗಂಟೆಗೆ ಕಬ್ಬನ್ ಉದ್ಯಾನವನದಲ್ಲಿರುವ ರಾಜ್ಯ ಸರಕಾರಿ ನೌಕರರ ಸಂಘದಲ್ಲಿ "ರಾಜ್ಯಮಟ್ಟದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2014" ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಗ್ರಾಹಕರಿಗೆ ತಿಳುವಳಿಕೆ ಹಾಗೂ ಅರಿವು ಮೂಡಿಸುವ ಸಲುವಾಗಿ ಏರ್ಪಡಿಸಲಾಗಿರುವ ಈ ಕಾರ್ಯಕ್ರಮವನ್ನು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರಾದ ಶ್ರೀ ದಿನೇಶ್ ಗುಂಡೂರಾವ್ ಉದ್ಘಾಟಿಸುವರು. ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರಾದ ಶ್ರೀ ಆರ್.ರೋಷನ್ ಬೇಗ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಾರಿಗೆ ಸಚಿವರು ಹಾಗೂ ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿ ಹಾಗು ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಭಾಗವಹಿಸುವರು.

ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರಾದ ಶ್ರಿ ಎಸ್.ಎಂ.ಆನಂದ್ ಅವರು ಗ್ರಾಹಕರ ಕೈಪಿಡಿ ಬಿಡುಗಡೆ ಮಾಡುವರು. ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಉಪಾಧ್ಯಕ್ಷ ಶ್ರೀ ಮೋಹನ್ ವಿ.ಅಸುಂಡಿ ಅವರು ಶಾಲಾ ಗ್ರಾಹಕರ ಸದಸ್ಯರಿಗೆ ಬಹುಮಾನ ವಿತರಣೆ ಮಾಡುವರು. ಬೆಂಗಳೂರು ನಗರ ಜಿಲ್ಲೆ ಹಾಗೂ ಗ್ರಾಮಾಂತರ ಜಿಲ್ಲೆಯಲ್ಲಿ ಸ್ಥಾಪನೆಯಾಗಿರುವ ಶಾಲಾ ಗ್ರಾಹಕರ ಕ್ಲಬ್‌ಗಳ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೇರಿದಂತೆ ಸುಮಾರು 1000 ದಿಂದ 1500 ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

## ಕಿರಿಯ ಇಂಜನಿಯರ್ ಹುದ್ದೆ ದಾಖಲಾತಿ ಪರಿಶೀಲನೆ

**ಬೆಂಗಳೂರು:ಡಿಸೆಂಬರ್:23:(ಕರ್ನಾಟಕ ವಾರ್ತೆ):–**

ಜಲಸಂಪನ್ಮೂಲ ಇಲಾಖೆಯಲ್ಲಿನ ಕಿರಿಯ ಇಂಜಿನಿಯರ್ (ಸಿವಿಲ್) 131, ಮತ್ತು ಮೆಕ್ಯಾನಿಕಲ್ 14 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಜನವರಿ 5 ಮತ್ತು 6 ರಂದು ಬೆಳಿಗ್ಗೆ 9.30 ಗಂಟೆಗೆ ಮತ್ತು ಮಧ್ಯಾಹ್ನ 2 ಗಂಟೆಗೆ ಮೂಲ ದಾಖಲಾತಿಯ ಪರಿಶೀಲನೆಯನ್ನು ಆಯೋಗದ ಕೇಂದ್ರ ಕಚೇರಿಯಲ್ಲಿ ನಡೆಸಲಾಗುವುದೆಂದು ಕರ್ನಾಟಕ ಲೋಕ ಸೇವಾ ಆಯೋಗವು ತಿಳಿಸಿದೆ.

ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ, ಪರಿಶೀಲನೆ ವೇಳೆ ಮತ್ತು ದಿನಾಂಕ, ಇತ್ಯಾದಿ ವಿವರಗಳನ್ನು ಆಯೋಗದ ವೆಬ್‌ಸೈಟ್ http://kpsc.kar.nic.in/Home_Page ನಿಂದ ಪಡೆಯಬಹುದಾಗಿದೆ.